2628(3000) ಶ್ರೀ ಸುರೇಶ್ ಬಾಬು ಸಿ.ಬಿ. (ಚಿಕ್ಕನಾಯಕನ ಹಳ್ಳಿ) :— ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ಚಿಕ್ಕನಾಯಕನಹಳ್ಳಿ ಕ್ಷೇತ್ರದ ಕಾಮಲಾಪುರ ಗ್ರಾಮದಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರದ ಅವಶ್ಯಕತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದಲ್ಲಿ ಯಾವಾಗ ಪ್ರಾರಂಭ ಮಾಡಲಾಗುವುದು;

ಇ) ಹೊಸ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಮಂಜೂರು ಮಾಡುವಾಗ ಕಮಲಾಪುರದಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರ ಮಂಜೂರು ಮಾಡುವ ಬಗ್ಗೆ ಆದ್ಯತೆ ನೀಡಲಾಗುವುದೇ?

ಡಾ: ಎ.ಬಿ. ಮಾಲಕರೆಡ್ಡಿ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :—

ಅ) ಇಲ್ಲ

ಆ) ಉದ್ಭವಿಸುವುದಿಲ್ಲ

ಇ) ಭಾರತ ಸರ್ಕಾರವು ಒಂಭತ್ತನೆ ಪಂಚವಾರ್ಷಿಕ ಯೋಜನೆಯಡಿಯಲ್ಲಿ ಕರ್ನಾಟಕ ರಾಜ್ಯದಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರ ಸ್ಥಾಪಿಸಲು ಶೂನ್ಯಗುರಿ ನಿಗಧಿಪಡಿಸಿರುವುದರಿಂದ ಹೊಸದಾಗಿ ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಸ್ಥಾಪಿಸುವ ಯೋಜನೆಯಿರುವುದಿಲ್ಲ.

ಹುಕ್ಕೇರಿ ತಾಲ್ಲೂಕಿನ ಅವರಗೋಳ್ ಮತ್ತು ಬಸಾಪುರ ಮಾಧ್ಯಮಿಕ ಶಾಲಾ ಕಟ್ಟಡಗಳನ್ನು ಪೂರ್ಣಗೊಳಿಸುವ ಬಗ್ಗೆ

2629 (2936) ಶ್ರೀ ಉಮೇಶ್ ವಿಶ್ವನಾಥ್ ವಿ. ಕತ್ತಿ (ಹುಕ್ಕೇರಿ) :— ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ. ಹುಕ್ಕೇರಿ ತಾಲ್ಲೂಕಿನ ಅವರಗೋಳ್, ಬಸಾಪುರ ಗ್ರಾಮದಲ್ಲಿ ಮಾಧ್ಯಮಿಕ ಶಾಲಾ ಕಟ್ಟಡ ನಿರ್ಮಾಣಕ್ಕೆ ಸರ್ಕಾರದ ಮಂಜೂರಾತಿ ದೊರೆತಿದೆಯೇ;

ಆ. ಈ ಗ್ರಾಮಗಳಲ್ಲಿ ಮಾಧ್ಯಮಿಕ ಶಾಲಾ ಕಟ್ಟಡ ನಿರ್ಮಾಣ ಪ್ರಾರಂಭಿಸಲಾಗಿದೆಯೇ ಪ್ರಾರಂಭಿಸಿದ್ದಲ್ಲಿ ಯಾವ ಹಂತದಲ್ಲಿದೆ;

ಇ. ಈ ಗ್ರಾಮಗಳ ಮಾಧ್ಯಮಿಕ ಶಾಲಾ ಕಟ್ಟಡ ನಿರ್ಮಾಣ ಪ್ರಾರಂಭಿಸಿ ಅಪೂರ್ಣವಾಗಲು ಕಾರಣಗಳೇನು;

ಈ. ಈ ಶಾಲಾ ಕಟ್ಟಡಗಳನ್ನು ಪೂರ್ಣಗೊಳಿಸಲು ಸರ್ಕಾರವು ಹಾಕಿಕೊಂಡಿರುವ ಕಾಲಮಿತಿಯೇನು?

ಶ್ರೀ ಹೆಚ್. ವಿಶ್ವನಾಥ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) :—

ಅ) ಹೌದು

ಆ) ಹೌದು. ಪ್ರಾರಂಭಿಸಲಾಗಿದೆ.

ಇ. ಸರ್ಕಾರಿ ಪ್ರೌಢಶಾಲೆ ಅವರಗೋಳ ಕಟ್ಟಡ ಲಿಂಟಲ್‌ವರೆಗೆ ಮುಗಿದಿದೆ.

ಈ. ಸರ್ಕಾರಿ ಪ್ರೌಢಶಾಲೆ ಬಸ್ಸಾಪುರ ಕಟ್ಟಡ ಕಾಮಗಾರಿ ಕೆಲಸದಲ್ಲಿ ಪ್ಲಾಸ್ಟರಿಂಗ್ ಕೆಲಸ ಬಾಕಿ ಇದ್ದು, ಪ್ರಗತಿ ಹಂತದಲ್ಲಿದೆ.

ಇ. ಆರ್ಥಿಕ ಮಿತಿಯಿಂದಾಗಿ ಕಟ್ಟಡದ ಕಾಮಗಾರಿ ಅಪೂರ್ಣಗೊಂಡಿದೆ.

ಈ. ಸದರಿ ಶಾಲಾ ಕಟ್ಟಗಳನ್ನು ಅನುದಾನದ ಲಭ್ಯತೆಯನ್ನಾದರಿಸಿ ಆದಷ್ಟು ಶೀಘ್ರವಾಗಿ ಪೂರ್ಣಗೊಳಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.

ಬೆಳಗಾವಿಯ ಕೆ.ಎಲ್.ಇ ಆಸ್ಪತ್ರೆಯಲ್ಲಿ ಬಡ ರೋಗಿಗಳಿಗೆ ಸರ್ಕಾರದ ಸವಲತ್ತು

2632 (2939) ಶ್ರೀ ಉಮೇಶ್ ವಿಶ್ವನಾಥ್ ವಿ. ಕತ್ತಿ (ಹುಕ್ಕೇರಿ) :— ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ. ಬೆಂಗಳೂರಿನ ಜಯದೇವ ಮತ್ತು ಕಿದ್ವಾಯಿ ಆಸ್ಪತ್ರೆಗಳಲ್ಲಿ ಹೃದಯ ಮತ್ತು ಕ್ಯಾನ್ಸರ್ ಚಿಕಿತ್ಸೆಗೆ ಬಂದ ಆರ್ಥಿಕವಾಗಿ ಕಡು ಬಡವ ರೋಗಿಗಳಿಗೆ ಸರ್ಕಾರದಿಂದ ಸವಲತ್ತುಗಳನ್ನು ಒದಗಿಸುತಿದ್ದು, ಉತ್ತರ ಕನ್ನಡ ಭಾಗದ ಆರ್ಥಿಕವಾಗಿ ಕಡು ಬಡವರು ಬೆಂಗಳೂರಿಗೆ ಬಂದು ಚಿಕಿತ್ಸೆ ಪಡೆಯಲು ಕಷ್ಟವಾಗಿ ಬೆಳಗಾಂನ ಕೆ.ಎಲ್.ಇ ಆಸ್ಪತ್ರೆಯಲ್ಲಿ ದಾಖಲಾಗಿ ಅಲ್ಲಿ ಚಿಕಿತ್ಸೆ ಪಡೆಯುತ್ತಿದ್ದು, ಅಂತಹವರಿಗೆ ಸರ್ಕಾರದಿಂದ ಸವಲತ್ತುಗಳನ್ನು ಒದಗಿಸಲು ಇರುವ ತೊಂದರೆ ಏನು?

ಆ) ಕೆ.ಎಲ್.ಇ ಆಸ್ಪತ್ರೆಯಲ್ಲಿ ಹೃದಯ ಮತ್ತು ಕ್ಯಾನ್ಸರ್ ಕಾಯಿಲೆಯಿಂದಾಗಿ ದಾಖಲಾದ ಕಡು ಬಡ ರೋಗಿಗಳಿಗೂ ಸಹ ಈ ಸೌಲಭ್ಯವನ್ನು ಕಲ್ಪಿಸಲಾಗುವುದೇ?

ಇ) ಹಾಗಿದಲ್ಲಿ ಎಂದಿನಿಂದ ಅನುಷ್ಠಾನಕ್ಕೆ ತರಲಾಗುವುದು?